# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಹಾಯಕ ಕಾರ್ಯಪಾಲಕ ಅಭಿಯಂತರರವರ ಕಛೇರಿ, ಪುಲಿಕೇಶಿನಗರ ಉಪವಿಭಾಗ, ರಾಬರ್ಟಸನ್ಸ್ ರಸ್ತೆ, ಫ್ರೇಜರ್ ಟೌನ್**

ಸ.ಕಾ.ನಿ.ಅ/ಪುನ/ಪಿಆರ್/ 07 /2022-23 ದಿನಾಂಕ: 20-08-2022

**ದಿನಾಂಕ:- 20-08-2022 ರಂದು ವಾರ್ಡ್ ನಂ.78 ರ ವಾರ್ಡ್ ಸಮಿತಿ ಹಾಗೂ ವಾರ್ಡ್ ವಿಪತ್ತು ನಿರ್ವಹಣಾ ಸಮಿತಿಯ ಸಭೆಯ ನಡುವಳಿಗಳು:-**

ವಾರ್ಡ್ ಸಮಿತಿಯ ಸಭೆಯು ಪ್ರಾರಂಭಗೊಳ್ಳುತ್ತಿದಂತೆ ನೋಡಲ್ ಅಧಿಕಾರಿಗಳಾದ ಶ್ರೀ.ಜಿ.ತಿಪ್ಪೇಸ್ವಾಮಿ ರವರು ಕಮಿಟಿ ಸಭೆಯ ಸದಸ್ಯರು ಮತ್ತು ಅಧಿಕಾರಿಗಳನ್ನು ಸ್ವಾಗತಿಸಿದರು.

ಹಿಂದೆ ನಡೆದ ಸಭೆಯಲ್ಲಿ ತಿಳಿಸಲಾಗಿದ ವಿಷಯಗಳ ಬಗ್ಗೆ ಈ ಕೆಳಕಂಡ ಸಭೆಯ ಕಾರ್ಯಸೂಚಿಯಂತೆ ತೆಗೆದು ಕೊಂಡಿರುವ ಕ್ರಮಗಳ ಬಗ್ಗೆ ತಿಳಿಸಲು ಸೂಚಿಸಿರುತ್ತಾರೆ.

1. ನೇತಾಜಿ ರಸ್ತೆಯಲ್ಲಿ ರಸ್ತೆ ಬದಿಯಲ್ಲಿ ತಳ್ಳುವ ಗಾಡಿಗಳಲ್ಲಿ ಬೀದಿ ವ್ಯಾಪರ ಮಾಡುತ್ತಿರುವುದ್ದರಿಂದ ಹಾಗೂ ರಸ್ತೆ ಬದಿಯಲ್ಲಿ ಕಸ ಹಾಕುತ್ತಿರುವುದ್ದರಿಂದ ಸಾರ್ವಜನಿಕರಿಗೆ ಹಾಗೂ ವಾಹನ ಸಂಚಾರಕ್ಕೆ ತೊಂದರೆಯಾಗುತ್ತಿರುವ ಬಗ್ಗೆ ಚರ್ಚಿಸಲಾಯಿತು.
2. ಸ್ಟೀಫನ್ಸ್ ರಸ್ತೆ, ಮಿಲ್ಲರ್ ರಸ್ತೆ ಮತ್ತು ಸಿಂಧಿ ಕಾಲೋನಿಯಲ್ಲಿ ರಸ್ತೆ ಗುಂಡಿಗಳಾಗಿದ್ದು ಕೂಡಲೇ ರಸ್ತೆ ಗುಂಡಿಗಳನ್ನು ಮುಚ್ಚಲು ತಿಳಿಸಲಾಗಿರುತ್ತದೆ.
3. ಕೋಲ್ಸ್ ರಸ್ತೆಯಲ್ಲಿ ರಸ್ತೆ ಬದಿಯಲ್ಲಿ ತಳ್ಳುವ ಗಾಡಿಗಳಲ್ಲಿ ಬೀದಿ ವ್ಯಾಪರ ಮಾಡುತ್ತಿರುವುದ್ದರಿಂದ ಹಾಗೂ ರಸ್ತೆ ಬದಿಯಲ್ಲಿ ಕಸ ಹಾಕುತ್ತಿರುವುದ್ದರಿಂದ ಸಾರ್ವಜನಿಕರಿಗೆ ಹಾಗೂ ವಾಹನ ಸಂಚಾರಕ್ಕೆ ತೊಂದರೆಯಾಗುತ್ತಿರುವ ಬಗ್ಗೆ ಚರ್ಚಿಸಲಾಯಿತು.
4. ಪರಮಜ್ಯೋತಿ ರಸ್ತೆಯಲ್ಲಿ ಮಳೆಗಾಲದಲ್ಲಿ ಮಳೆ ನೀರು ನಿಲ್ಲುತ್ತಿರುವ ಬಗ್ಗೆ ತಿಳಿಸಿರುತ್ತಾರೆ.
5. ಫ್ರೇಜರ್ ಟೌನ್ ವ್ಯಾಪ್ತಿಯ ಎಲ್ಲಾ ರಸ್ತೆಗಳಿಗೆ ದಿನಾಂಕ: 10-09-2022 ರ ನಂತರ ಡಾಂಬರೀಕರಣ ಕೈಗೊಳ್ಳಲಾಗುವುದೆಂದು ವಾರ್ಡಿನ ಅಭಿಯಂತರರು ತಿಳಿಸಿರುತ್ತಾರೆ.
6. ಕೆಂಚಪ್ಪ ರಸ್ತೆಯಲ್ಲಿ ರಸ್ತೆ ಡಾಂಬರೀಕರಣ ಮಾಡುವ ಬಗ್ಗೆ ತಿಳಿಸಿರುತ್ತಾರೆ.
7. 24-08-2022 ರಂದು ಪುಟ್‌ಪಾತ್ ಒತ್ತುವರಿ ಮಾಡಿರುವುದನ್ನು ತೆರವುಗೊಳಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲು ವಾರ್ಡಿನ ಅಭಿಯಂತರರಿಗೆ ಸೂಚಿಸಲಾಗಿರುತ್ತದೆ.
8. ವಾರ್ಡ್ ವ್ಯಾಪ್ತಿಯಲ್ಲಿ ಸಿ.ಸಿ.ಟಿ.ವಿ ಕ್ಯಾಮರಗಳನ್ನು ಅಳವಡಿಸಲು ತಿಳಿಸಲಾಯಿತು.
9. ಕೋಲ್ಸ್ ಪಾರ್ಕಿನಲ್ಲಿ ಮಕ್ಕಳ ಆಟದ ಸಾಮಗ್ರಿಗಳನ್ನು ಅಳವಡಿಸಲು ಸೂಚಿಸಲಾಯಿತು.
10. ಕೋಲ್ಸ್ ಪಾರ್ಕಿನಲ್ಲಿರುವ ಸಾರ್ವಜನಿಕ ಶೌಚಲಾಯವನ್ನು ರಿಪೇರಿ ಮಾಡಲು ಕ್ರಮಕೈಗೊಳ್ಳಲು ಸೂಚಿಸಲಾಯಿತು.
11. ನೇತಾಜಿ ರಸ್ತೆಯ ಜಿ.ಕೆ.ವೇಲು ಪೋಟೋ ಶಾಪ್ ರಸ್ತೆಯಿಂದ ಪೆಟ್ರೋಲ್ ಬಂಕ್ ವರೆಗೆ ರಸ್ತೆ ಬದಿಯ ಕಾಂಪೌಂಡ್ ಗೋಡೆ ನಿರ್ಮಿಸುತ್ತಿದ್ದು, ಇದ್ದರಿಂದ ಸಾರ್ವಜನಿಕರಿಗೆ ಹಾಗೂ ವಾಹನ ಸಂಚಾರಕ್ಕೆ ತೊಂದರೆಯಾಗುತ್ತಿರುವ ಬಗ್ಗೆ ತಿಳಿಸಿರುತ್ತಾರೆ.

ನಂತರ ಮುಂದಿನ ಸಭೆಯೊಳಗೆ ವಾರ್ಡ್ ವ್ಯಾಪ್ತಿಯಲ್ಲಿನ ಮಾಹಿತಿಯನ್ನು ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಕಾಮಗಾರಿಗಳ ಮಾಹಿತಿಗಳನ್ನು ನೀಡಲು ತಿಳಿಸಿ ಸಭೆಯನ್ನು ಮುಕ್ತಾಯಗೊಳಿಸಲು ಸೂಚಿಸುತ್ತಾ, ಎಲ್ಲರಿಗೂ ವಂದಿಸಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿ

**ನೋಡಲ್ ಅಧಿಕಾರಿಗಳು**

Scanned with CamScanner